ಯಾರೂ ಬರುತ್ತಿಲ್ಲ. ಅಲ್ಲಿ ಒಂದು ಆಫೀಸ್ ಇಲ್ಲ. ರಿಗ್ ಯಂತ್ರಗಳು ಇಲ್ಲ. ಆದ್ದರಿಂದ ತಕ್ಷಣ ಒಂದು ಆಫೀಸ್ ಮಾಡಿ ಅಲ್ಲಿ ಒಂದು ವಾಹನ ಕೊಡಿ.

ಶ್ರೀ ಅಬ್ದುಲ್ ನಜೀರ್‌ಸಾಬ್.—ಇದು ಹೊಸ ಡಿವಿಸನ್ ಆದ್ದರಿಂದ ಸ್ವಲ್ಪ ತೊಂದರೆಯಾಗಿದೆ ಈ ತೊಂದರೆಯನ್ನು ಪರಿಹಾರ ಮಾಡುವುದಕ್ಕೆ ನಾನು ಪ್ರಯತ್ನ ಮಾಡುತ್ತೇನೆ.

ಬೆಳಗಾಂ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನಲ್ಲಿನ ನೀರಿನ ಸರಬರಾಜುಗಳ ಬಗ್ಗೆ

೫೧೯. ಶ್ರೀ ಎಸ್. ಹೆಚ್. ಕೌಜಲಗಿ (ಬೈಲಹೊಂಗಲ).—ಮಾನ್ಯ ಗ್ರಾಮೀಣ ಅಭಿವೃದ್ಧಿ ಪಂಚಾಯತ್ ರಾಜ್ ಮತ್ತು ವಕ್ಫ್ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಳಗಾಂ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನಲ್ಲಿ ವಾಹನ ಬಾಡಿಗೆ ಹಾಗೂ ಡಿಸೇಲ್ ಬಾಬ್ತು ಬಾಕಿ ಪಾವ್ತಿಮಾಡದಿರುವುದರಿಂದ ವಾಹನಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡುವುದು ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ, ಈ ಬಗ್ಗೆ ಹಣ ಬಿಡುಗಡೆ ಮಾಡಿ ನೀರು ಸರಬರಾಜು ಮಾಡಲು ಪುನಹ ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ ?

ಶ್ರೀ ಅಬ್ದುಲ್ ನಜೀರ್ ಸಾಬ್ (ಗ್ರಾಮೀಣ ಅಭಿವೃದ್ಧಿ, ಪಂಚಾಯತ್ ರಾಜ್ ಮತ್ತು ವಕ್ಫ್ ಮಂತ್ರಿಗಳು).—

ಅ) ವಾಹನದಿಂದ ಸಾಗಣೆ ಮಾಡುತ್ತಿರುವ ನೀರು ಸರಬರಾಜು ನಿಲ್ಲಿಸಿಲ್ಲ.

ಆ) ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಶ್ರೀ ಎಸ್ ಹೆಚ್. ಕೌಜಲಗಿ.—ಮಾನ್ಯ ಅಧ್ಯಕ್ಷರೇ, ವಾಹನದ ಬಾಡಿಗೆ ಮತ್ತು ಡೀಸಲ್ ಬಿಲ್ ಕೊಡದೆ ಇರುವುದರಿಂದ ಕುಡಿಯುವ ನೀರಿನ ಸಾಗಾಣಿಕೆ ನಿಂತಿದೆ. ನೀರು ಸಾಗಾಣಿಕೆ ಮಾಡಿರುವ ಹಣವನ್ನು ಎಷ್ಟು ದಿನಗಳಲ್ಲಿ ಬಿಡುಗಡೆ ಮಾಡುತ್ತೀರಿ ಎಂದು ತಿಳಿಸಬೇಕು.

ಶ್ರೀ ಅಬ್ದುಲ್ ನಜೀರ್ ಸಾಬ್.—ಕುಡಿಯುವ ನೀರಿನ ಸಾಗಾಣಿಕೆ ನಿಂತಿದೆ ಎಂದು ಹೇಳಿದ್ದಾರೆ. ಅದರ ಬಾಬತ್ತಿನ ಹಣವನ್ನು ಕೂಡಲೇ ಬಿಡುಗಡೆ ಮಾಡುತ್ತೇನೆ.

ಶ್ರೀ ಎಸ್. ಹೆಚ್. ಕೌಜಲಗಿ.—ಎಷ್ಟು ದಿನದಲ್ಲಿ ಬಿಡುಗಡೆ ಮಾಡುತ್ತೀರಿ ?

ಶ್ರೀ ಅಬ್ದುಲ್ ನಜೀರ್ ಸಾಬ್.—ಒಂದು ವಾರದಲ್ಲಿ ಮಾಡಿಸುತ್ತೇನೆ.

ಇಲಕಲ್ ಮತ್ತು ಹುನಗುಂದ ಪಟ್ಟಣಗಳಿಗೆ ಹಾಗೂ ಮಾರ್ಗದಲ್ಲಿನ ೧೨ ಹಳ್ಳಿಗಳಿಗೆ ಕುಡಿಯುವ ನೀರು ಸರಬರಾಜು ಮಾಡುವ ಸಮಗ್ರ ಯೋಜನೆಯ ಬಗ್ಗೆ.

೫೫೫. ಶ್ರೀ ಶಿವಸಂಗಪ್ಪ ಸಿದ್ದಪ್ಪ ಕಡಪಟ್ಟಿ (ಹುನಗುಂದ).—ಮಾನ್ಯ ನಗರಾಭಿವೃದ್ಧಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಹುನಗುಂದ ಇಲಕಲ್ ಹಾಗೂ ಹನ್ನೆರಡು ಸಮಸ್ಯಾತ್ಮಕ ಕುಡಿಯುವ ನೀರಿನ ಯೋಜನೆಯಲ್ಲಿ ಕೃಷ್ಣಾ ನದಿಯ ನೀರನ್ನು ಒದಗಿಸುವುದಾಗಿ ಭರವಸೆ ಕೊಟ್ಟಿದ್ದನ್ನು ಸರಕಾರದ ಗಮನಕ್ಕೆ ಬಂದಿದೆಯೆ ?

ಆ) ಹಾಗಿದ್ದಲ್ಲಿ ಸದರಿ ಕಾಮಗಾರಿಯು ಯಾವ ಹಂತದಲ್ಲಿದೆ ?

ಇ) ಸದರಿ ಸಮಸ್ಯಾತ್ಮಕ ಹಳ್ಳಿಗಳಿಗೆ ಕುಡಿಯುವ ನೀರಿನ ಬವಣೆಯನ್ನು ತಪ್ಪಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು ?